

ಅರುಣ ಪಿ. ಭಟ್ಟ



## ವಾರಭವಿಷ್ಯ: 06.01.2022ರಿಂದ 12.01.2022ರವರೆಗೆ




ಕುಟುಂಬದ ಬಗ್ಗೆ ಹೆಮ್ಮೆ ಪಡುವಂಥ ಬೆಳವಣಿಗೆ ಆಗುತ್ತದೆ. ವಾರದ ಶುರುವಿನಿಂದಲೇ ಉತ್ಸಾಹದಿಂದ ಕಾಣಿಸಿಕೊಳ್ಳುತ್ತೀರಿ. ನಿಮ್ಮ ವೈಯಕ್ತಿಕ ಶ್ರಮದಿಂದ ಹೆಚ್ಚಿನ ಯಶಸ್ಸು ಪಡೆಯಲು ಸಾಧ್ಯವಾಗುತ್ತದೆ. ಆ ಕಾರಣಕ್ಕಾಗಿ ಹಲವು ಕೆಲಸ– ಕಾರ್ಯಗಳನ್ನು ಪೂರೈಸಲಾಗುತ್ತದೆ. ಸಹೋದ್ಯೋಗಿಗಳ ಭಿನ್ನಾಭಿಪ್ರಾಯಗಳನ್ನು ಮರೆಯಲು ಪ್ರಯತ್ನ ಮಾಡುತ್ತೀರಿ. ಶುಭದಿನ 12. ಗಣಪತಿ ಸುಬ್ರಹ್ಮಣ್ಯ ಜಪ ಮಾಡಿರಿ.




ಶುಭ ಕಾರ್ಯವನ್ನು ಆಯೋಜಿಸುವ ಸಾಧ್ಯತೆ ಇದೆ. ಈ ವಾರ ಗ್ರಹಗತಿಗಳು ನಿಮಗೆ ಅನುಕೂಲಕರವಾಗಿವೆ. ಈ ಅವಧಿಯಲ್ಲಿ ಮುಖ್ಯವಾದ ಕೆಲಸಗಳನ್ನು ಮಾಡಿಕೊಂಡು ಬಿಡಿ. ಉದ್ಯೋಗ ಸ್ಥಳದಲ್ಲಿ ನಿಮ್ಮ ಗೌರವ, ವರ್ಚಸ್ಸು ಹೆಚ್ಚುವ ಸಾಧ್ಯತೆ ಇದೆ. ಹಿರಿಯ ಅಧಿಕಾರಿಗಳು, ಸಹೋದ್ಯೋಗಿಗಳ ಜತೆಗೆ ನಿಮ್ಮ ಬಾಂಧವ್ಯ ಗಟ್ಟಿ ಆಗಲಿದೆ. ಶುಭದಿನ 09. ಲಕ್ಷ್ಮೀನಾರಾಯಣ ಹೃದಯ ಪಾರಾಯಣ ಮಾಡಿರಿ.




ಆರೋಗ್ಯ ಸುಧಾರಿಸುವುದು. ಆಸ್ತಿ ಖರಿದಿ ಬಗ್ಗೆ ಚಿಂತನೆ ಕಲಾವಿದರಿಗೆ ಸಾಹಿತಿಗಳಿಗೆ ಉತ್ತಮ ವಾರ ರಾಜಕೀಯದ ಅವಕಾಶ. ಸಂಘ ಸಂಸ್ಥೆಗಳಿಂದ ಧನಲಾಭ. ಶತ್ರುಗಳು ಹಿಂದೆ ಸರಿಯುವರು. ವೃತ್ತಿ ವ್ಯವಹಾರದಲ್ಲಿ ಲಾಭ ವ್ಯಾವಹಾರಿಕ ಅನುಕೂಲತೆ. ಸರಕಾರಿ ಕೆಲಸ ಶೀಘ್ರ ಆಗುವುದು. ತಂದೆ ತಾಯಿಯವರ ಆರೋಗ್ಯ ಸುಧಾರಣೆ, ಮಾನ, ಮನ್ನಣೆ ದೊರೆಯುವುದು. ಶುಭದಿನ 10. ಚಂಡಿ ಪಾರಾಯಣ ಮಾಡಿರಿ.




ನವೋಲ್ಲಾಸ ಬರುವುದು. ಧರ್ಮ ದಾನಕ್ಕಾಗಿ ಖರ್ಚು. ಮಿತ್ರರಿಗೆ ಸಹಾಯ. ವ್ಯಾಪಾರದಲ್ಲಿ ಅಧಿಕ ಲಾಭ ಹಳೆಯ ಮಿತ್ರರ ಆಗಮನ. ಹಲವು ದಿನಗಳ ಸಮಸ್ಯೆ ಬಗೆಹರೆಯುವುದು. ಹೊಟ್ಟೆನೋವಿನ ಕಾಟ. ಮನೆಯಲ್ಲಿ ಸಂಭ್ರಮ. ಮಕ್ಕಳಿಂದ ಶುಭವಾರ್ತೆ. ಮಹತ್ವದ ಕಾಗದ ಪತ್ರಗಳ ರಕ್ಷಣೆ. ಸಹೋದರರ ಸಹಾಯ. ಶುಭದಿನ 10. ಶಿವ ಕವಚ ಓದಿರಿ.




ಕುಟುಂಬ ಸದಸ್ಯರ ಜತೆಗೆ ಹೆಚ್ಚಿನ ಸಮಯ ಕಳೆಯುವ ಸಾಧ್ಯತೆ ಇದೆ. ಇದೇ ವೇಳೆ ಕುಟುಂಬದ ಸದಸ್ಯರಿಗೆ ಕೆಲವು ಕೆಲಸಗಳನ್ನು ವಹಿಸುತ್ತೀರಿ. ಅವುಗಳನ್ನು ತುಂಬ ಶ್ರದ್ಧೆಯಿಂದ ಅವರು ಮಾಡಿ ಮುಗಿಸುತ್ತಾರೆ. ಈ ಹಿಂದೆಂದಿಗಿಂತಲೂ ಈ ವಾರ ಹೆಚ್ಚು ಚಟುವಟಿಕೆಯಿಂದ ನೀವು ಇರಬೇಕಾಗುತ್ತದೆ. ಭೂ ವ್ಯಾಜ್ಯವೊಂಕ್ಕೆ ಶ್ರಮ ಹಾಕಲಿದ್ದೀರಿ. ಶುಭದಿನ 05. ಸೌಂದರ್ಯಲಹರಿ ಪಠಿಸಿರಿ.




ನಿಮ್ಮ ತಾಂತ್ರಿಕ ಜ್ಞಾನವನ್ನು ಹೆಚ್ಚಿಸಿಕೊಳ್ಳಲು ಹಲವರ ಪರಿಚಯ ಆಗುತ್ತದೆ. ನಿಮ್ಮಲ್ಲಿ ಆಗುತ್ತಿರುವ ಸಕಾರಾತ್ಮಕ ಪರಿಣಾಮ ಅನುಭವಕ್ಕೆ ಬರುತ್ತದೆ. ಸಂಗಾತಿ ಜತೆಗೆ ಇದನ್ನು ಹಂಚಿಕೊಳ್ಳುತ್ತೀರಿ. ಒಟ್ಟಾರೆಯಾಗಿ ಕುಟುಂಬದೊಳಗೆ ಸಂತಸದ ವಾತಾವರಣ ಇರುತ್ತದೆ. ಈ ವರೆಗಿನ ನಿಮ್ಮ ಆದಾಯ ಮೂಲಗಳಿಂದ ಬರುವ ಗಳಿಕೆ ಮತ್ತಷ್ಟು ಹೆಚ್ಚಾಗಲಿದೆ. ಶುಭದಿನ 08. ದಕ್ಷಿಣಾಮೂರ್ತಿ ಸ್ತೋತ್ರ ಪಠಿಸಿರಿ.




ಈ ವಾರ ಬದುಕಿನಲ್ಲಿ ಲಾಭ ಹಾಗೂ ಮಹತ್ತರವಾದ ಪ್ರಗತಿ ಕಾಣುವ ಯೋಗ ಇದೆ. ಸೇವಾ ವಲಯದಲ್ಲಿ ಕಾರ್ಯ ನಿರ್ವಹಿಸುವವರಿಗೆ ಪ್ರತಿಭೆಯನ್ನು ಪ್ರದರ್ಶಿಸಲು ಹಾಗೂ ಬಡ್ತಿ ಪಡೆಯಲು ಅತ್ಯುತ್ತಮ ಅವಕಾಶಗಳಿವೆ. ವಾರದ ಮಧ್ಯ ಭಾಗದಲ್ಲಿ ಪ್ರಗತಿ ಮತ್ತಷ್ಟು ವೇಗ ಪಡೆದುಕೊಳ್ಳುತ್ತದೆ. ಶೈಕ್ಷಣಿಕ ಅರ್ಹತೆ ಹೆಚ್ಚಿಸಿಕೊಳ್ಳಲು ಪ್ರಯತ್ನಿಸುತ್ತೀರಿ. ಶುಭದಿನ 10. ದೇವ್ಯಪರಾದ ಕ್ಷಮಾಪನಾ ಸ್ತೋತ್ರ ಪಠಿಸಿರಿ.




ಬಹಳ ಮುಖ್ಯವಾದ ಪಟ್ಟಿಯೊಂದನ್ನು ಸಿದ್ಧ ಮಾಡಿಕೊಳ್ಳುವುದಕ್ಕೆ ವಾರದ ಶುರುವಿನಲ್ಲಿ ಸಿದ್ಧರಾಗುತ್ತೀರಿ. ಕೆಲ ವಿಚಾರಗಳು ಕಣ್ತಪ್ಪಿನಿಂದ ಬಿಟ್ಟು ಹೋಗುವ ಸಾಧ್ಯತೆ ಇದೆ. ಇದರಿಂದ ಹಿರಿಯ ಅಧಿಕಾರಿಗಳು ಬೇಸರಿಸಿಕೊಳ್ಳುತ್ತಾರೆ. ಈ ಅವಧಿಯಲ್ಲಿ ತಾಳ್ಮೆ ಮತ್ತು ಧೈರ್ಯ ಬಹಳ ಮುಖ್ಯವಾಗುತ್ತದೆ. ಮುಖ್ಯವಾಗಿ ಸಮಯದ ಕೊರತೆ ವಿಪರೀತವಾಗಿ ಕಾಡುತ್ತದೆ. ಶುಭದಿನ 05. ಶ್ರೀ ದುರ್ಗಾಪಾರಾಯಣ ಮಾಡಿರಿ.




ಆಸ್ತಿ ಖರೀದಿಗೆ ಪ್ರಯತ್ನಿಸುತ್ತಿರುವವರು ಸಂಬಂಧಪಟ್ಟ ಕಾಗದಪತ್ರಗಳನ್ನು ಕೂಲಂಕಷವಾಗಿ ಪರಿಶೀಲನೆ ನಡೆಸಲಿದ್ದೀರಿ. ಈ ಸಮಯದಲ್ಲಿ ಆರೋಗ್ಯ ಸ್ಥಿತಿ ಪೂರಕವಾಗಿಲ್ಲ. ಭುಜದ ನೋವು, ತಲೆ ನೋವು ಹಾಗೂ ಕಣ್ಣಿನ ಬೇನೆ ನಿಮ್ಮನ್ನು ಕಾಡಲಿದೆ. ಇದರಿಂದ ಚಿಂತೆಗೆ ಒಳಗಾಗುತ್ತೀರಿ. ಇನ್ನು ವೈಯಕ್ತಿಕ ಸಂಬಂಧದಲ್ಲಿ ಕೆಲವು ಕಹಿ ಬೆಳವಣಿಗೆಗಳು ಆಗಲಿವೆ. ಶುಭದಿನ 07. ಶ್ರೀ ವೆಂಕಟೇಶ್ವರ ಸ್ತೋತ್ರ ಪಠಿಸಿರಿ.




ವ್ಯಾಪಾರದಲ್ಲಿ ಪ್ರಗತಿ ಕಾಣಿಸುತ್ತದೆ. ಆತ್ಮವಿಶ್ವಾಸ ಹೆಚ್ಚಾಗುತ್ತದೆ. ಪ್ರತಿಷ್ಠಿತ ಸಂಸ್ಥೆಯೊಂದರ ಜತೆಗೆ ಮಹತ್ವದ ಒಪ್ಪಂದವೊಂದಕ್ಕೆ ಸಹಿ ಹಾಕುವ ಸಾಧ್ಯತೆಗಳಿವೆ. ಈ ಎಷ್ಟೇ ಚಟುವಟಿಕೆ ಒತ್ತಡದ ಕೆಲಸ ಇದ್ದರೂ ಆರಾಮವಾಗಿ ಪೂರೈಸಲು ನಿಮ್ಮಿಂದ ಸಾಧ್ಯವಾಗಲಿದೆ. ಮನೆಗೆ ಅಗತ್ಯ ಇರುವ ವಸ್ತುಗಳನ್ನು ಖರೀದಿ ಮಾಡಲು ಮನಸು ನಿರ್ಧರಿಸುತ್ತದೆ. ಶುಭದಿನ 06. ಕಾಲಭೈರವನ ಸೇವೆ ಮಾಡಿರಿ.




ವಾರದ ಶುರುವಿನಲ್ಲಿ ನಿಮ್ಮ ಬಳಿ ಇರುವ ಹಣದ ಸದುಪಯೋಗ ಮಾಡಿಕೊಳ್ಳುವ ಬಗ್ಗೆ ಯೋಜನೆ ರೂಪಿಸಲಿದ್ದೀರಿ. ಅದರ ಅನುಷ್ಠಾನಕ್ಕಾಗಿ ಹಾಕುವ ಶ್ರಮಕ್ಕೆ ನಿರೀಕ್ಷಿತ ಫಲಿತಾಂಶ ಕೂಡ ದೊರೆಯಲಿದೆ. ನೀವು ಹಾಕಿಕೊಂಡ ಗುರಿಯನ್ನು ಅಂದುಕೊಂಡ ಸಮಯಕ್ಕಿಂತ ಪ್ರೀತಿ ಪ್ರೇಮದಲ್ಲಿ ಇರುವವರು ಸಂಗಾತಿಯ ಭಾವನೆಗಳಿಗೆ ಗೌರವ ನೀಡುತ್ತೀರಿ. ಶುಭದಿನ 08. ಗಣಪತಿಗೆ ದೂರ್ವಾರ್ಚನೆ ಮಾಡಿರಿ.




ವಾರದ ಆರಂಭದಲ್ಲಿ ಉನ್ನತ ಶಿಕ್ಷಣಕ್ಕೆ ಯತ್ನಿಸುತ್ತಿರುವವರಿಗೆ ಯಶಸ್ಸು ದೊರೆಯುವ ಸಾಧ್ಯತೆ ಹೆಚ್ಚಿದೆ. ಈ ಅವಧಿಯಲ್ಲಿ ದೇವತಾ ಆರಾಧನೆಗೆ ನಿಮ್ಮ ಶ್ರಮ ಹಾಕುತ್ತೀರಿ. ಬಹಳ ಒತ್ತಡ ಹಾಕಿ ನಿಮ್ಮಿಂದ ಕೆಲಸ ತೆಗೆಸುವ ಯತ್ನಗಳಾಗುತ್ತವೆ. ಉದ್ಯೋಗ ಸ್ಥಳದಲ್ಲಿ ಭಾವನಾತ್ಮಕವಾಗಿ ಕೆಲವು ನಿರ್ಧಾರಗಳನ್ನು ತೆಗೆದುಕೊಳ್ಳಲಿದ್ದೀರಿ. ಶುಭದಿನ 08. ಕನಕಧಾರಾ ಸ್ತೋತ್ರ ಪಠಣಮಾಡಿರಿ.